## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿರುವ ಸರ್ಕಾರಿ / ಖಾಸಗಿ ನರ್ಸಿಂಗ್ ಶಾಲೆಗಳು ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಅಭ್ಯರ್ಥಿಗಳನ್ನು ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡುವ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸುವ ಬಗ್ಗೆ.

**ಓದಲಾಗಿದೆ:**
1) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ವೈಶಿನಿ/ಎನ್ಆರ್‌ಸಿ(2)/02/2018-19
2) ದಿನಾಂಕ: 07-06-2018.
3) ಮುಖ್ಯ ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ರಾಜ್ಯ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಿಎಂಬಿ/10/18-19 ದಿನಾಂಕ: 26-05-2018.

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2) ರ ಪತ್ರದಲ್ಲಿ ವೈದ್ಯಕೀಯ ಶಿಕ್ಷಣ ನಿರ್ದೇಶಕರು ಹಾಗೂ ಮುಖ್ಯ ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ರಾಜ್ಯ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ ಇವರು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 02.04.2018 ರಂದು ನಡೆದ ಸಭೆಯಲ್ಲಿನ ತೀರ್ಮಾನದನ್ವಯ 2018-19 ನೇ ಸಾಲಿನಿಂದ ರಾಜ್ಯದಲ್ಲಿರುವ ಸರ್ಕಾರಿ ನರ್ಸಿಂಗ್ ಶಾಲೆಗಳು ಮತ್ತು ಖಾಸಗಿ ನರ್ಸಿಂಗ್ ಶಾಲೆಗಳಲ್ಲಿನ ಸರ್ಕಾರಿ ಕೋಟಾದ ಜಿ.ಎನ್.ಎಂ. ನರ್ಸಿಂಗ್ ಕೋರ್ಸುಗಳ ಸೀಟುಗಳಿಗೆ ಹಾಗೂ ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಡಿಪ್ಲೊಮಾ ಪ್ಯಾರಾ ಮೆಡಿಕಲ್ ಕೋರ್ಸುಗಳ ಸೀಟುಗಳಿಗೆ ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, 2018-19 ನೇ ಸಾಲಿನಿಂದ ರಾಜ್ಯದ ಸರ್ಕಾರಿ / ಖಾಸಗಿ ನರ್ಸಿಂಗ್ ಶಾಲೆಗಳು ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲು ಸರ್ಕಾರವು ತೀರ್ಮಾನಿಸಿ, ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 228 ಎಂಎಂಸಿ 2018, ಬೆಂಗಳೂರು, ದಿನಾಂಕ: 12-06-2018**

2018-19 ನೇ ಸಾಲಿನಿಂದ ರಾಜ್ಯದ ಸರ್ಕಾರಿ / ಖಾಸಗಿ ನರ್ಸಿಂಗ್ ಶಾಲೆಗಳು ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ ನಿಯಂತ್ರಣ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾ ನಿರ್ದೇಶಕರು ಪ್ರತಿ ವರ್ಷ ನರ್ಸಿಂಗ್ / ಪ್ಯಾರಾ ಮೆಡಿಕಲ್ ಕೋರ್ಸುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಸೀಟ್ ಮ್ಯಾಟ್ರಿಕ್ಸ್ ತಯಾರಿಸಿ, ಸರ್ಕಾರದ ಅನುಮೋದನೆಯೊಂದಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.